### 4. ಟ್ರಂಪ್ ಬೆದರಿಕೆ: ಔಷಧ ರಫ್ತಿಗೆ ಭಾರತ ನಿರ್ಧಾರ

ಕೊರೊನಾ ಸೋಂಕು ನಿವಾರಣೆಗೆ ಬಳಸುವ ಮಾತ್ರೆಗಳನ್ನು ಪೂರೈಸದಿದ್ದರೆ ಪ್ರತೀಕಾರ ತೆಗೆದುಕೊಳ್ಳುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಸಿದ್ದ ಬೆನ್ನಲ್ಲೇ ಭಾರತ ಕ್ರಮಕ್ಕೆ ಮುಂದಾಗಿದೆ. ಮಲೇರಿಯಾ ನಿರೋಧಕ ಮಾತ್ರೆ ಹೈಡ್ರಾಕ್ಸಿಕ್ಲೊರೊಕ್ಲಿನ್ ಹಾಗೂ ಪ್ಯಾರಾಸಿಟಾಮೋಲ್ ಮಾತ್ರೆಗಳ ರಫ್ತಿನ ಮೇಲೆ ಇದ್ದ ನಿರ್ಬಂಧವನ್ನು ತಾತ್ಕಾಲಿಕವಾಗಿ ಸಡಿಲಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ.

ಹೈಡ್ರಾಕ್ಸಿಕ್ಲೊರೊಕ್ವಿನ್ ಮಾತ್ರೆಗಳನ್ನು ಕೊರೊನಾ ಸೋಂಕಿನಿಂದ ಬಳಲುವ ರೋಗಿಗಳ ಚಿಕಿತ್ಸೆಗೆ ಶಿಫಾರಸ್ಸು ಮಾಡಲಾಗಿದೆ. ಭಾರತ, ಅಮೆರಿಕ ಸೇರಿದಂತೆ ಹಲವು ದೇಶಗಳಲ್ಲಿ ಈ ಮಾತ್ರೆಗಳನ್ನು ಬಳಸಲಾಗುತ್ತದೆ. ಈ ಮಾತ್ರೆಗಳ ರಫ್ತು ನಿಷೇಧಿಸಿ ಕೇಂದ್ರ ಸರ್ಕಾರದ ವಿದೇಶಿ ವ್ಯಾಪಾರ ನಿರ್ದೇಶನಾಲಯವು (ಡಿಜಿಎಫ್‌ಟಿ) ಏಪ್ರಿಲ್ 4ರಂದು ಆದೇಶ ಹೊರಡಿಸಿತ್ತು. ಆದರೆ ಟ್ರಂಪ್ ಅವರು ಮಾತ್ರೆ ಪೂರೈಸುವಂತೆ ಭಾರತಕ್ಕೆ ಒತ್ತಡ ಹೇರಿದರು. ನಿಷೇಧ ಹೇರಿ ಮೂರು ದಿನಗಳಲ್ಲೇ ಭಾರತ ನಿರ್ಧಾರವನ್ನು ಪರಿಷ್ಕರಿಸಿದೆ.

ಸೋಂಕಿನಿಂದ ಜಗತ್ತಿನ ಹಲವಾರು ದೇಶಗಳು ತೀವ್ರವಾಗಿ ತತ್ತರಿಸಿವೆ. ಮಾನವೀಯತೆ ನೆಲೆಗಟ್ಟಿನಲ್ಲಿ ಔಷಧ ರಫ್ತು ಮಾಡಲು ನಡೆದ ಉನ್ನತ ಮಟ್ಟದ ಸಭೆಯಲ್ಲಿ ನಿರ್ಧರಿಸಲಾಗಿದೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ಅನುರಾಗ್ ಶ್ರೀವಾಸ್ತವ ಹೇಳಿದ್ದಾರೆ. ಆದರೆ ಯಾವ ದೇಶಗಳಿಗೆ ಮಾತ್ರೆಗಳನ್ನು ರಫ್ತು ಮಾಡಲಾಗುತ್ತದೆ ಎಂಬ ಬಗ್ಗೆ ಅವರು ಖಚಿತವಾಗಿ ಹೇಳಲಿಲ್ಲ.

ನರೇಂದ್ರ ಮೋದಿ ಅವರಿಗೆ ಕರೆ ಮಾಡಿದ್ದ ಟ್ರಂಪ್, ಮಾತ್ರೆಗಳ ರಫ್ತಿನ ಮೇಲಿನ ನಿರ್ಬಂಧ ತೆರವುಗೊಳಿಸಲು ಮನವಿ ಮಾಡಿದ್ದರು. ಸುದ್ದಿಗಾರರ ಪ್ರಶ್ನೆಯೊಂದಕ್ಕೆ ಮೋದಿ ಅವರು ಔಷಧ ರಫ್ತು ಮಾಡಲು ಒಪ್ಪದಿದ್ದರೆ ತೊಂದರೆಯಿಲ್ಲ. ಕೋವಿಡ್ ಪಿಡುಗು ವಿಶ್ವವ್ಯಾಪಿಯಾಗಿ ಹರಡುತ್ತಿರುವ ಈ ಹೊತ್ತಿನಲ್ಲಿ ಅಂತರರಾಷ್ಟ್ರೀಯ ಸಮುದಾಯದ ಜೊತೆ ಸೌಹಾರ್ದ ಮತ್ತು ಬಾಂಧವ್ಯ ಗಟ್ಟಿಗೊಳಿಸಲು ಭಾರತ ಯಾವಾಗಲೂ ಬಯಸುತ್ತದೆ ಎಂದು ವಿದೇಶಾಂಗ ಇಲಾಖೆ ವಕ್ತಾರರು ತಿಳಿಸಿದ್ದಾರೆ.

ಹೈಡ್ರಾಕ್ಸಿಕ್ಲೊರೊಕ್ವಿನ್ ಪೂರೈಕೆ ಮಾಡುವಂತೆ ನೆರೆಯ ಶ್ರೀಲಂಕಾ, ನೇಪಾಳ ಸೇರಿದಂತೆ ಕನಿಷ್ಠ 20 ರಾಷ್ಟ್ರಗಳು ಈಗ ಬೇಡಿಕೆ ಸಲ್ಲಿಸಿವೆ. ಬೇಡಿಕೆ ಸಲ್ಲಿಸಿರುವ ಎಲ್ಲ ದೇಶಗಳಿಗೆ ಮಲೇರಿಯಾ ನಿರೋಧಕ ಮಾತ್ರೆಗಳನ್ನು ಹಂತಹಂತವಾಗಿ ಭಾರತ ಪೂರೈಸಲಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

ಆಧಾರ:ಪ್ರಜಾವಾಣಿ, ದಿನಾಂಕ: 08.04.2020